# ಕರ್ನಾಟಕ ಸರ್ಕಾರ

ಸಂ. ಗ್ರಾಅಪ 17 ಜಿಪಸ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 03.05.2014

## ಅಧಿಸೂಚನೆ

ಕರ್ನಾಟಕ ಪಂಚಾಯತ್ ರಾಜ್ (ಜಿಲ್ಲಾ ಪಂಚಾಯತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಹುದ್ದೆಗಳ ಮೀಸಲಾತಿ) ನಿಯಮಗಳು, 2005 ಮತ್ತು (ತಿದ್ದುಪಡಿ) ನಿಯಮಗಳು, 2010 ರಲ್ಲಿ ನಿಗಧಿಪಡಿಸಿದ ಹಾಗೂ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 177(2) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಜನವರಿ 2011 ರಲ್ಲಿ ರಚಿತವಾಗಿರುವ ಜಿಲ್ಲಾ ಪಂಚಾಯತಿಗಳ ಮೂರನೇ ಅವಧಿಗೆ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಮೀಸಲಾತಿಯನ್ನು ಅನುಸೂಚಿತ ಪಂಗಡ / ಅನುಸೂಚಿತ ಜಾತಿ / ಹಿಂದುಳಿದ ವರ್ಗಗಳು ಮತ್ತು ಮಹಿಳೆಯರಿಗೆ ಹಾಗೂ ಅದರೊಂದಿಗೆ ಮೀಸಲಿರಿಸದವರಿಗೆ ಹಂಚಿಕೆಯಾದ ಹುದ್ದೆಗಳ ವಿವರಗಳನ್ನು ದಿನಾಂಕ 16.04.2014ರ ಇದೇ ಸಮಸಂಖ್ಯೆಯ ಅಧಿಸೂಚನೆಯಲ್ಲಿ ಪ್ರಕಟಿಸಲಾಗಿತ್ತು ಹಾಗೂ ರಾಜ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂ. 41091/2012 ಮತ್ತು ಇತರೆ ರಿಟ್ ಅರ್ಜಿಗಳಲ್ಲಿ ನೀಡಿದ ನಿರ್ದೇಶನದಂತೆ ವಿವರಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಮತ್ತು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿತ್ತು.

ವಿವಿಧ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಾರ್ವಜನಿಕರು ಸಲ್ಲಿಸಿದ ಮನವಿಗಳನ್ನು ಸರ್ಕಾರವು ನಿಯಮಾನುಸಾರ ಪರಿಶೀಲಿಸಿರುತ್ತದೆ, ಅದರಂತೆ ಜಿಲ್ಲಾ ಪಂಚಾಯತಿಗಳ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಅನುಸೂಚಿತ ಪಂಗಡ / ಅನುಸೂಚಿತ ಜಾತಿ / ಹಿಂದುಳಿದ ವರ್ಗಗಳು ಮತ್ತು ಮಹಿಳೆಯರಿಗೆ ಹಾಗೂ ಅದರೊಂದಿಗೆ ಮೀಸಲಿರಿಸದವರಿಗೆ ಹಂಚಿಕೆಯಾದ ಪರಿಷ್ಕೃತ ವಿವರಗಳನ್ನು ಈ ಕೆಳಗೆ ನಿರ್ದಿಷ್ಟಪಡಿಸಲಾಗಿದೆ. ಅದರನ್ವಯ ದಿನಾಂಕ: 16-04-2014 ರ ಅಧಿಸೂಚನೆಯನ್ನು ಪರಿಷ್ಕರಿಸಿ, **ಪರಿಷ್ಕೃತ ಅಧಿಸೂಚನೆಯನ್ನು ಹೊರಡಿಸಲಾಗಿದೆ.**

| ಕ್ರಮ ಸಂಖ್ಯೆ | ಜಿಲ್ಲಾ ಪಂಚಾಯತಿಯ ಹೆಸರು | ಅಧ್ಯಕ್ಷ ಸ್ಥಾನದ ಮೀಸಲಾತಿ | ಉಪಾಧ್ಯಕ್ಷ ಸ್ಥಾನದ ಮೀಸಲಾತಿ |
|---|---|---|---|
| 1 | 2 | 3 | 4 |
| 1 | ಬಾಗಲಕೋಟೆ | ಹಿಂದುಳಿದ ವರ್ಗ-ಅ | ಅನುಸೂಚಿತ ಜಾತಿ (ಮ) |
| 2 | ಬೆಂಗಳೂರು (ನಗರ) | ಅನುಸೂಚಿತ ಜಾತಿ | ಸಾಮಾನ್ಯ |
| 3 | ಬೆಂಗಳೂರು (ಗ್ರಾ) | ಸಾಮಾನ್ಯ (ಮ) | ಹಿಂದುಳಿದ ವರ್ಗ-ಅ (ಮ) |
| 4 | ಬೆಳಗಾವಿ | ಹಿಂದುಳಿದ ವರ್ಗ-ಅ (ಮ) | ಅನುಸೂಚಿತ ಜಾತಿ |
| 5 | ಬಳ್ಳಾರಿ | ಅನುಸೂಚಿತ ಪಂಗಡ | ಸಾಮಾನ್ಯ (ಮ) |
| 6 | ಬೀದರ | ಸಾಮಾನ್ಯ (ಮ) | ಅನುಸೂಚಿತ ಜಾತಿ (ಮ) |
| 7 | ವಿಜಾಪುರ | ಸಾಮಾನ್ಯ | ಹಿಂದುಳಿದ ವರ್ಗ-ಬ |
| 8 | ಚಾಮರಾಜನಗರ | ಹಿಂದುಳಿದ ವರ್ಗ-ಬ | ಅನುಸೂಚಿತ ಪಂಗಡ (ಮ) |
| 9 | ಚಿಕ್ಕಬಳ್ಳಾಪುರ | ಸಾಮಾನ್ಯ | ಅನುಸೂಚಿತ ಜಾತಿ (ಮ) |
| 10 | ಚಿಕ್ಕಮಗಳೂರು | ಸಾಮಾನ್ಯ (ಮ) | ಸಾಮಾನ್ಯ (ಮ) |
| 11 | ಚಿತ್ರದುರ್ಗ | ಸಾಮಾನ್ಯ | ಹಿಂದುಳಿದ ವರ್ಗ-ಅ (ಮ) |
| 12 | ದಕ್ಷಿಣ ಕನ್ನಡ | ಸಾಮಾನ್ಯ (ಮ) | ಸಾಮಾನ್ಯ |

| | | | |
|---|---|---|---|
| 13 | ದಾವಣಗೆರೆ | ಅನುಸೂಚಿತ ಪಂಗಡ (ಮ) | ಸಾಮಾನ್ಯ (ಮ) |
| 14 | ಧಾರವಾಡ | ಹಿಂದುಳಿದ ವರ್ಗ–ಅ | ಸಾಮಾನ್ಯ (ಮ) |
| 15 | ಗದಗ | ಹಿಂದುಳಿದ ವರ್ಗ–ಅ (ಮ) | ಸಾಮಾನ್ಯ (ಮ) |
| 16 | ಗುಲ್ಬರ್ಗಾ | ಹಿಂದುಳಿದ ವರ್ಗ–ಅ | ಸಾಮಾನ್ಯ |
| 17 | ಹಾಸನ | ಸಾಮಾನ್ಯ (ಮ) | ಸಾಮಾನ್ಯ |
| 18 | ಹಾವೇರಿ | ಅನುಸೂಚಿತ ಜಾತಿ (ಮ) | ಹಿಂದುಳಿದ ವರ್ಗ–ಅ (ಮ) |
| 19 | ಕೊಡಗು | ಸಾಮಾನ್ಯ (ಮ) | ಹಿಂದುಳಿದ ವರ್ಗ–ಬ (ಮ) |
| 20 | ಕೋಲಾರ | ಸಾಮಾನ್ಯ (ಮ) | ಹಿಂದುಳಿದ ವರ್ಗ–ಅ |
| 21 | ಕೊಪ್ಪಳ | ಸಾಮಾನ್ಯ | ಅನುಸೂಚಿತ ಜಾತಿ |
| 22 | ಮಂಡ್ಯ | ಹಿಂದುಳಿದ ವರ್ಗ–ಬ (ಮ) | ಸಾಮಾನ್ಯ (ಮ) |
| 23 | ಮೈಸೂರು | ಅನುಸೂಚಿತ ಜಾತಿ (ಮ) | ಸಾಮಾನ್ಯ |
| 24 | ರಾಯಚೂರು | ಅನುಸೂಚಿತ ಜಾತಿ (ಮ) | ಹಿಂದುಳಿದ ವರ್ಗ–ಅ |
| 25 | ರಾಮನಗರ | ಸಾಮಾನ್ಯ | ಸಾಮಾನ್ಯ (ಮ) |
| 26 | ಶಿವಮೊಗ್ಗ | ಸಾಮಾನ್ಯ | ಸಾಮಾನ್ಯ |
| 27 | ತುಮಕೂರು | ಅನುಸೂಚಿತ ಜಾತಿ | ಹಿಂದುಳಿದ ವರ್ಗ–ಅ |
| 28 | ಉತ್ತರ ಕನ್ನಡ | ಹಿಂದುಳಿದ ವರ್ಗ–ಅ (ಮ) | ಸಾಮಾನ್ಯ (ಮ) |
| 29 | ಉಡುಪಿ | ಸಾಮಾನ್ಯ (ಮ) | ಸಾಮಾನ್ಯ |
| 30 | ಯಾದಗಿರಿ | ಸಾಮಾನ್ಯ | ಅನುಸೂಚಿತ ಪಂಗಡ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎಸ್.ಎಂ. ಜುಲ್ಫಿಖಾರ್ ಉಲ್ಲಾ)
ನಿರ್ದೇಶಕರು (ಪಂ.ರಾಜ್-2) ಮತ್ತು
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

3/05/14

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು– ಈ ಅಧಿಸೂಚನೆಯನ್ನು ಇಂದೇ ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 300 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಕೊಠಡಿ ಸಂ.330, 3ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು, ಇವರಿಗೆ ಒದಗಿಸುವಂತೆ ಕೋರಿದೆ.

ಪ್ರತಿ:

1. ಪ್ರಾದೇಶಿಕ ಆಯುಕ್ತರು, ಮೈಸೂರು, ಬೆಳಗಾವಿ, ಬೆಂಗಳೂರು ಮತ್ತು ಗುಲ್ಬರ್ಗಾ ವಿಭಾಗಗಳು.
2. ಎಲ್ಲಾ ಜಿಲ್ಲಾಧಿಕಾರಿಗಳು.
3. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಮಾನ್ಯ ಗ್ರಾ.ಅ&ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ&ಪಂ.ರಾಜ್ ಇಲಾಖೆ.
6. ವೆಬ್‌ಸೈಟ್/ಕರ್ನಾಟಕ ವಿಕಾಸ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.